## ಕರ್ನಾಟಕ ಸರ್ಕಾರ

ಸಂಖ್ಯೆ: ಆಇ 03 ಮುಭನಿ 2023

ಕರ್ನಾಟಕ ಸರ್ಕಾರ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 11.11.2024.

## ಅಧಿಸೂಚನೆ

ಭವಿಷ್ಯ ನಿಧಿಗಳ ಅಧಿನಿಯಮ, 1925 (1925 ರ ಕೇಂದ್ರ ಅಧಿನಿಯಮ XIX) ರ 8 ನೇ ಪ್ರಕರಣವನ್ನು ಕರ್ನಾಟಕ ರಾಜ್ಯ ನಾಗರಿಕ ಸೇವೆಗಳ ಅಧಿನಿಯಮ, 1978 (1990ರ ಕರ್ನಾಟಕ ಅಧಿನಿಯಮ 14)ರ 8 ರೊಂದಿಗೆ ಓದಿಕೊಂಡು ಅದೇ ಅಧಿನಿಯಮದ (3)ನೇ ಪ್ರಕರಣದ (1)ನೇ ಉಪ ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು, ಕರ್ನಾಟಕ ಸಾಮಾನ್ಯ ಭವಿಷ್ಯ ನಿಧಿ 2016 ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಈ ಮುಂದಿನ ಕರಡನ್ನು ರಚಿಸಲು ಉದ್ದೇಶಿಸಿದ್ದು, ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ ಅಧಿನಿಯಮ, 1978ರ 3ನೇ ಪ್ರಕರಣದ (2)ನೇ ಉಪ-ಪ್ರಕರಣದ (ಎ) ಖಂಡದ ಮೂಲಕ ಅಗತ್ಯ ಪಡಿಸಿರುವಂತೆ ಅಧಿಸೂಚನೆ ಸಂಖ್ಯೆ: ಆಇ 03 ಮುಭನಿ 2023, ದಿನಾಂಕ:31.07.2024 ಅನ್ನು ದಿನಾಂಕ:7 ನೇ ಆಗಸ್ಟ್, 2024ರ ಅಧಿಕೃತ ರಾಜ್ಯ ಪತ್ರದ ಭಾಗ-IV-A ರಲ್ಲಿ ಪ್ರಕಟಿಸಿದ ದಿನಾಂಕದಿಂದ 15 ದಿನಗಳೊಳಗಾಗಿ ಇದರಿಂದ ಬಾಧಿತರಾಗಬಹುದಾದ ವ್ಯಕ್ತಿಗಳಿಂದ ಆಕ್ಷೇಪಣೆಗಳು ಹಾಗೂ ಸಲಹೆಗಳನ್ನು ಆಹ್ವಾನಿಸಿ ಪ್ರಕಟಿಸಲಾಗಿದ್ದುದರಿಂದ;

ಮತ್ತು ಸದರಿ ರಾಜ್ಯ ಪತ್ರವನ್ನು ದಿನಾಂಕ: 7 ನೇ ಆಗಸ್ಟ್ 2024 ರಂದು ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಿರುವುದರಿಂದ;

ಮತ್ತು ಯಾವುದೇ ಆಕ್ಷೇಪಣೆಗಳು ಹಾಗೂ ಸಲಹೆಗಳು ರಾಜ್ಯ ಸರ್ಕಾರದಲ್ಲಿ ಸ್ವೀಕೃತವಾಗಿಲ್ಲದಿರುವುದರಿಂದ;

ಕರ್ನಾಟಕ ರಾಜ್ಯ ನಾಗರಿಕ ಸೇವೆಗಳ ಅಧಿನಿಯಮ, 1978 (1990 ರ ಕರ್ನಾಟಕ ಅಧಿನಿಯಮ 14) ರ (3)ನೇ ಪ್ರಕರಣದ (1)ನೇ ಉಪ-ಪ್ರಕರಣವನ್ನು ಅದೇ ಅಧಿನಿಯಮದ ಪ್ರಕರಣ 8 ರೊಂದಿಗೆ ಓದಿಕೊಂಡಂತೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಭವಿಷ್ಯ ನಿಧಿಗಳ ಅಧಿನಿಯಮ, 1925 (1925 ರ ಕೇಂದ್ರ ಅಧಿನಿಯಮ XIX)ದ 8ನೇ ಪ್ರಕರಣವನ್ನು ಓದಿಕೊಂಡು, ಕರ್ನಾಟಕ ಸರ್ಕಾರವು ಕರ್ನಾಟಕ ಸಾಮಾನ್ಯ ಭವಿಷ್ಯ ನಿಧಿ ನಿಯಮಗಳು, 2016 ನ್ನು ಮತ್ತಷ್ಟು ತಿದ್ದುಪಡಿ ಮಾಡಿ ಈ ಮೂಲಕ ಈ ಕೆಳಕಂಡ ನಿಯಮಗಳನ್ನು ರಚಿಸುತ್ತದೆ, ಎಂದರೆ:-

## ನಿಯಮಗಳು

1. **ಹೆಸರು ಮತ್ತು ಪ್ರಾರಂಭ:** (1) ಈ ನಿಯಮಗಳನ್ನು ಕರ್ನಾಟಕ ಸಾಮಾನ್ಯ ಭವಿಷ್ಯ ನಿಧಿ (ತಿದ್ದುಪಡಿ) ನಿಯಮಗಳು, 2024.

   (2) ಈ ನಿಯಮಗಳು ಅಧಿಕೃತ ರಾಜ್ಯಪತ್ರದಲ್ಲಿ ಅಂತಿಮವಾಗಿ ಪ್ರಕಟವಾದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

2. ಅನುಸೂಚಿಯ ಪ್ರತಿಸ್ಥಾಪನೆ:- ಕರ್ನಾಟಕ ಸಾಮಾನ್ಯ ಭವಿಷ್ಯ ನಿಧಿ ನಿಯಮಗಳು, 2016 ರ ಅನುಸೂಚಿಯಲ್ಲಿ ಈ ಕೆಳಕಂಡಂತೆ ಸೇರಿಸತಕ್ಕದ್ದು, ಅಂದರೆ:-

## ಅನುಸೂಚಿ

(ನಿಯಮ 16 ಮತ್ತು 17 ಕ್ಕೆ)

ಕರ್ನಾಟಕ ಸಾಮಾನ್ಯ ಭವಿಷ್ಯ ನಿಧಿ ನಿಯಮಗಳು, 2016 ರ ಅಡಿಯಲ್ಲಿ ತಾತ್ಕಾಲಿಕ ಮುಂಗಡಗಳನ್ನು ಮತ್ತು ಭಾಗಶಃ ಅಂತಿಮ ಹಿಂಪಡೆಯುವಿಕೆಗಳನ್ನು ಮಂಜೂರು ಮಾಡಲು ಸಕ್ಷಮವಾಗಿರುವ ಪ್ರಾಧಿಕಾರಗಳು.

**I. ತಾತ್ಕಾಲಿಕ ಮುಂಗಡಗಳು:** ಕರ್ನಾಟಕ ಸಾಮಾನ್ಯ ಭವಿಷ್ಯ ನಿಧಿ ನಿಯಮಗಳು, 2016 ರ ನಿಯಮ-16 ಮತ್ತು ನಿಯಮ-17ರ ಅಡಿಯಲ್ಲಿ ದಿನಾಂಕ:21.10.1994 ರ ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ 48 ಮಕಮು 1994 ರಲ್ಲಿ ನಿಗದಿಪಡಿಸಲಾಗಿರುವ Take Home Salary ಯ ಮಿತಿ ಹಾಗೂ ಚಂದಾದಾರರ ಲಭ್ಯವಿರುವ ಸೇವೆಯ ಅವಧಿಯನ್ನು ಗಣನೆಗೆ ತೆಗೆದುಕೊಂಡು ತಾತ್ಕಾಲಿಕ ಮುಂಗಡಗಳನ್ನು ಮಂಜೂರು ಮಾಡುವ ಪ್ರಾಧಿಕಾರಗಳು ಈ ಕೆಳಗಿನಂತಿರುತ್ತವೆ.

| ಕ್ರ.ಸಂ | ಮಂಜೂರಾತಿ ಪ್ರಾಧಿಕಾರ | ಪ್ರತ್ಯಾಯೋಜಿಸಲು ಶಿಫಾರಸ್ಸು ಮಾಡಲಾದ ಅಧಿಕಾರ |
|---|---|---|
| 1. | ಇಲಾಖಾ ಮುಖ್ಯಸ್ಥರ ಕಛೇರಿಯಲ್ಲಿ ಜಂಟಿ ನಿರ್ದೇಶಕರು ಅಥವಾ ನಿಯಂತ್ರಣಾಧಿಕಾರಿಗಳು | ಇಲಾಖಾ ಮುಖ್ಯಸ್ಥರ ಕಛೇರಿಯಲ್ಲಿ ಕಾರ್ಯನಿರ್ವಹಿಸುವ ಸರ್ಕಾರಿ ನೌಕರರಿಗೆ ಸದರಿ ನಿಯಮಗಳ ನಿಯಮ 16 ಮತ್ತು 17ರ ಅಡಿಯಲ್ಲಿ ತಾತ್ಕಾಲಿಕ ಮುಂಗಡಗಳನ್ನು ಅದರಲ್ಲಿ ನಿರ್ದಿಷ್ಟಪಡಿಸಿದ ಉದ್ದೇಶಗಳಿಗೆ ಮಂಜೂರು ಮಾಡುವ ದಿನಾಂಕದಂದು ಸರ್ಕಾರಿ ನೌಕರನ ಸಾಮಾನ್ಯ ಭವಿಷ್ಯ ನಿಧಿ ಖಾತೆಯಲ್ಲಿ ಇರುವ ಉಳಿಕೆ ಮೊತ್ತದ ಗರಿಷ್ಠ 80% (ಎಂಭತ್ತು ಪ್ರತಿಶತ) ನ್ನು ಮಂಜೂರು ಮಾಡುವುದು. |
| 2. | ಜಿಲ್ಲಾ ಮಟ್ಟದ ಇತರೆ ಅಧಿಕಾರಿಗಳು | ಇಲಾಖಾ ಮುಖ್ಯಸ್ಥರ ಕಛೇರಿಯಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಕಛೇರಿಗಳಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳಿಗೆ ಸದರಿ ನಿಯಮಗಳ ನಿಯಮ 16 ಮತ್ತು 17 ರಡಿಯಲ್ಲಿ ತಾತ್ಕಾಲಿಕ ಮುಂಗಡಗಳನ್ನು ಅದರಲ್ಲಿ ನಿರ್ದಿಷ್ಟಪಡಿಸಿದ ಉದ್ದೇಶಗಳಿಗೆ ಮಂಜೂರು ಮಾಡುವ ದಿನಾಂಕದಂದು ಸರ್ಕಾರಿ ನೌಕರನ ಸಾಮಾನ್ಯ ಭವಿಷ್ಯ ನಿಧಿ ಖಾತೆಯಲ್ಲಿ ಇರುವ ಉಳಿಕೆ ಮೊತ್ತದ ಗರಿಷ್ಠ 80% (ಎಂಭತ್ತು ಪ್ರತಿಶತ) ನ್ನು ಮಂಜೂರು ಮಾಡುವುದು. |

**II. ಹಿಂಪಡೆಯುವಿಕೆಗಳು:-** ಕರ್ನಾಟಕ ಸಾಮಾನ್ಯ ಭವಿಷ್ಯ ನಿಧಿ ನಿಯಮಗಳು, 2016 ರ ನಿಯಮ 26ರ ಜೊತೆಗೆ ಓದಲಾದ ನಿಯಮ-27 ರ ಅಡಿಯಲ್ಲಿ ಭಾಗಶಃ ಅಂತಿಮ ಹಿಂಪಡೆಯುವಿಕೆಗಳನ್ನು ಮಂಜೂರು ಮಾಡುವ ಪ್ರಾಧಿಕಾರಗಳು ಈ ಕೆಳಗಿನಂತಿರುತ್ತವೆ.

| ಕ್ರ. ಸಂ | ಮಂಜೂರಾತಿ ಪ್ರಾಧಿಕಾರ | ಪ್ರತ್ಯಾಯೋಜಿಸಲು ಶಿಫಾರಸ್ಸು ಮಾಡಲಾದ ಅಧಿಕಾರ |
|---|---|---|
| 1. | ಇಲಾಖಾ ಮುಖ್ಯಸ್ಥರ ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಜಂಟಿ ನಿರ್ದೇಶಕರು ಅಥವಾ ನಿಯಂತ್ರಣ ಅಧಿಕಾರಿಗಳು. | ಇಲಾಖಾ ಮುಖ್ಯಸ್ಥರ ಕಛೇರಿಯಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಕಛೇರಿಗಳಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳಿಗೆ, ಸದರಿ ನಿಯಮಗಳ ನಿಯಮ 26(1) ನೇ ಉಪನಿಯಮದ ಅಂಶ(a) ರಲ್ಲಿ ನಿರ್ದಿಷ್ಟ ಪಡಿಸಿದ ಕಾರಣಕ್ಕಾಗಿ ಅದರೊಂದಿಗೆ ಓದಲಾದ ನಿಯಮ 27 ರಡಿಯಲ್ಲಿ ಭಾಗಶ: ಅಂತಿಮ ಹಿಂತೆಗೆದುಕೊಳ್ಳುವಿಕೆಯನ್ನು ಅದರಲ್ಲಿ ನಿರ್ದಿಷ್ಟಪಡಿಸಿದ ಉದ್ದೇಶಗಳಿಗೆ ಮಂಜೂರು ಮಾಡುವ ದಿನಾಂಕದಂದು ಸರ್ಕಾರಿ ನೌಕರನ ಸಾಮಾನ್ಯ ಭವಿಷ್ಯ ನಿಧಿ ಖಾತೆಯಲ್ಲಿ ಇರುವ ಉಳಿಕೆ ಮೊತ್ತದ ಗರಿಷ್ಠ 90%ನ್ನು ಮಂಜೂರು ಮಾಡುವುದು. |
| 2. | ಜಿಲ್ಲಾ ಮಟ್ಟದ ಇತರ ಅಧಿಕಾರಿಗಳು | ಇಲಾಖಾ ಮುಖ್ಯಸ್ಥರ ಕಛೇರಿಯಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಕಛೇರಿಗಳಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳಿಗೆ, ಸದರಿ ನಿಯಮಗಳ ನಿಯಮ 26(1) ನೇ ಉಪನಿಯಮದ ಅಂಶ(a) ರಲ್ಲಿ ನಿರ್ದಿಷ್ಟ ಪಡಿಸಿದ ಕಾರಣಕ್ಕಾಗಿ ಅದರೊಂದಿಗೆ ಓದಲಾದ ನಿಯಮ 27 ರಡಿಯಲ್ಲಿ ಭಾಗಶ: ಅಂತಿಮ ಹಿಂತೆಗೆದುಕೊಳ್ಳುವಿಕೆಯನ್ನು ಅದರಲ್ಲಿ ನಿರ್ದಿಷ್ಟಪಡಿಸಿದ ಉದ್ದೇಶಗಳಿಗೆ ಮಂಜೂರು ಮಾಡುವ ದಿನಾಂಕದಂದು ಸರ್ಕಾರಿ ನೌಕರನ ಸಾಮಾನ್ಯ ಭವಿಷ್ಯ ನಿಧಿ ಖಾತೆಯಲ್ಲಿ ಇರುವ ಉಳಿಕೆ ಮೊತ್ತದ ಗರಿಷ್ಠ 90%ನ್ನು ಮಂಜೂರು ಮಾಡುವುದು. |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ನೇತ್ರಪ್ರಭಾ ಎಂ.ಧಾಯಪುಲೆ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಆಡಳಿತ ಮತ್ತು ಮುಂಗಡಗಳು)

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಮತ್ತು ಆರ್ಥಿಕ ಇಲಾಖೆ (ಮುಂಗಡಗಳು), ಬೆಂಗಳೂರು-560 001 ಇವರಿಗೆ 100 ಪ್ರತಿಗಳನ್ನು ಪೂರೈಸಲು.

**ಪ್ರತಿಯನ್ನು:**

1. ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ) ಕರ್ನಾಟಕ, ಪಿ.ಒ.ಬಾಕ್ಸ್ ನಂ.5329/5369, ಪಾರ್ಕ್ ಹೌಸ್ ರೋಡ್, ಬೆಂಗಳೂರು – 560 001.
2. ಪ್ರಧಾನ ಮಹಾಲೇಖಪಾಲರು (ಜನರಲ್ & ಸೋಷಿಯಲ್ ಸೆಕ್ಟರ್ ಆಡಿಟ್), ಕರ್ನಾಟಕ, ನ್ಯೂ ಬಿಲ್ಡಿಂಗ್, ಆಡಿಟ್ ಭವನ, ಪಿ.ಬಿ.ನಂ.5398, ಬೆಂಗಳೂರು – 560 001.
3. ಪ್ರಧಾನ ಮಹಾಲೇಖಪಾಲರು (ಎಕನಾಮಿಕ್ & ರೆವೆನ್ಯೂ ಸೆಕ್ಟರ್ ಆಡಿಟ್), ಕರ್ನಾಟಕ, ನ್ಯೂ ಬಿಲ್ಡಿಂಗ್, ಆಡಿಟ್ ಭವನ, ಪಿ.ಬಿ.ನಂ.5398, ಬೆಂಗಳೂರು – 560 001.

4. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು / ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು.
5. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳಿಗೆ /ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.
6. ರಿಜಿಸ್ಟ್ರಾರ್, ಕರ್ನಾಟಕ ಉಚ್ಚ ನ್ಯಾಯಾಲಯ/ಕರ್ನಾಟಕ ಲೋಕಾಯುಕ್ತ/ ಕರ್ನಾಟಕ ಆಡಳಿತ ನ್ಯಾಯಮಂಡಳಿ ಬೆಂಗಳೂರು.
7. ಕಾರ್ಯದರ್ಶಿಗಳು, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
8. ಕಾರ್ಯದರ್ಶಿಗಳು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
9. ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಸಭೆ / ವಿಧಾನ ಪರಿಷತ್, ವಿಧಾನ ಸೌಧ, ಬೆಂಗಳೂರು.
10. ಎಲ್ಲಾ ಜಿಲ್ಲಾಧಿಕಾರಿಗಳಿಗೆ,
11. ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
12. ಆಯುಕ್ತರು, ಖಜಾನೆ ಆಯುಕ್ತಾಲಯ, 6ನೇ ಮಹಡಿ, ಕೆಪಿಸಿಎಲ್ ಗ್ರೀನ್ ಬಿಲ್ಡಿಂಗ್, ಔಷಧ ನಿಯಂತ್ರಣ ಕಟ್ಟಡದ ಆವರಣ, ಅರಮನೆ ರಸ್ತೆ, ಬೆಂಗಳೂರು.
13. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
14. ಆರ್ಥಿಕ ಇಲಾಖೆಯ ಗಣಕ ಕೋಶ-ಆರ್ಥಿಕ ಇಲಾಖೆಯ ವೆಬ್-ಸೈಟ್ ನಲ್ಲಿ ಅಪ್-ಲೋಡ್ ಮಾಡಲು.
15. ಕಛೇರಿ ಪ್ರತಿ / ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**ಹಿಂಬರಹ ಸಂಖ್ಯೆ: ಡಿಟಿಇ/ಇಎಸ್‌ಟಿ(13)/16/ 2024.** **ದಿ: 14.12.2024.**

ಹಿಂಬರಹ ಮುಖಾಂತರ ಸರ್ಕಾರದ ಅಧಿಸೂಚನೆ ಸಂಖ್ಯೆ; ಆಇ 03 ಮುಭನಿ 2023. ಬೆಂಗಳೂರು. ದಿನಾಂಕ: 11.11.2024. ಅನ್ನು ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್ ಇಂಜಿನಿಯರಿಂಗ್ ಕಾಲೇಜು ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ ಇವರ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ.

ಆಡಳಿತಾಧಿಕಾರಿ,
ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು - 01

ಇಲಾಖಾ ವೆಬ್ ಸೈಟ್ ಮುಖಾಂತರ